# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 147 |
| ಸದಸ್ಯರ ಹೆಸರು | : | ಡಾ: ಕೆ.ಗೋವಿಂದರಾಜ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 19-12-2022 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಹಾಗೂ ಕನ್ನಡ<br>ಮತ್ತು ಸಂಸ್ಕೃತಿ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ಕೆ.ಪಿ.ಟಿ.ಸಿ.ಎಲ್. ಹುದ್ದೆಗಳಿಗೆ ಇತ್ತೀಚೆಗೆ ನಡೆದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲೂ ಭಾರಿ ಅಕ್ರಮ ನಡೆದಿರುವ ಬಗ್ಗೆ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಕೆ.ಪಿ.ಟಿ.ಸಿ.ಎಲ್. ಕಿರಿಯ ಸಹಾಯಕ ಹುದ್ದೆಗಳಿಗೆ ಪರೀಕ್ಷೆ ನಡೆದಿದ್ದು, ಅಕ್ರಮ ನಡೆದ ಬಗ್ಗೆ ವರದಿಯಾಗಿದ್ದು, ಅವುಗಳ ಸಂಪೂರ್ಣ ವಿವರಗಳನ್ನು ನೀಡುವುದು; | ದಿನಾಂಕ:07.08.2022 ರಂದು ಕೆಪಿಟಿಸಿಎಲ್ ನಿಗಮದಿಂದ 360 ಕಿರಿಯ ಸಹಾಯಕ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪರೀಕ್ಷೆ ನಡೆಸಲಾಯಿತು.<br><br>ಬೆಳಗಾವಿ ಜಿಲ್ಲೆಯ ಗೋಕಾಕ್ ತಾಲ್ಲೂಕಿನಲ್ಲಿ ಜೆಎಸ್ಎಸ್ ಪದವಿ ಪೂರ್ವ ಕಾಲೇಜಿನಲ್ಲಿನ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆ ಬರೆಯುತ್ತಿದ್ದ ಅಭ್ಯರ್ಥಿ ಸಿದ್ದಪ್ಪ ಕೆಂಪಣ್ಣ ಮದಿಹಳ್ಳಿ, ಪ್ರಶ್ನೆ ಪತ್ರಿಕೆ ವಿತರಿಸಿದ ತಕ್ಷಣ ಸ್ಮಾರ್ಟ್‌ವಾಚ್ ಬಳಸಿ ಫೋಟೋ ತೆಗೆಯಲು ಪ್ರಯತ್ನಿಸಿದಾಗ ಈ ಶಬ್ಧವನ್ನು ಕೇಳಿ ಕೊಠಡಿ ಮೇಲ್ವಿಚಾರಕರು ಸದರಿ ಅಭ್ಯರ್ಥಿಯನ್ನು ಹಿಡಿದು, ಸ್ಮಾರ್ಟ್‌ವಾಚ್‌ನ್ನು ವಶಪಡಿಸಿಕೊಂಡು ಪರೀಕ್ಷಾ ಕೇಂದ್ರದ ಉಪ ಮುಖ್ಯ ಅಧೀಕ್ಷಕರ ವಶಕ್ಕೆ ನೀಡಿರುತ್ತಾರೆ.<br><br>ಈ ಬಗ್ಗೆ ದಿನಾಂಕ:09.08.2022 ರಂದು ಉಪ ನಿರ್ದೇಶಕರು, ಪಪೂಶಿ ಇಲಾಖೆ ಚಿಕ್ಕೋಡಿ ಜಿಲ್ಲೆ ಇವರ ಕಚೇರಿಯಲ್ಲಿ ದ್ವಿ.ದ.ಸ ಆಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಸಚ್ಚಿನ್ ಶ್ರೀಧರ ಕಮತರ ಇವರು ಗೋಕಾಕ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿರುತ್ತಾರೆ. ಈ ಬಗ್ಗೆ ಪೊಲೀಸ್ ತನಿಖೆ ಮುಂದುವರೆದಿದೆ.<br><br>ದಿನಾಂಕ:23.08.2022 ರ ಪೊಲೀಸ್ ವರದಿಯಲ್ಲಿ, ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಅಭ್ಯರ್ಥಿಗೆ ಉತ್ತರ ರವಾನೆಯಾಗಿರುವುದು ಹಾಗೂ ಎಲೆಕ್ಟ್ರಾನಿಕ್ಸ್ ಉಪಕರಣಗಳನ್ನು ಬಳಸಿ, ಪರೀಕ್ಷೆ ಬರೆದಿರುವುದು ಕಂಡು ಬಂದಿರುವುದಿಲ್ಲ ಎಂದು ವರದಿಸಿರುತ್ತಾರೆ. |

...2

| | | |
|---|---|---|
| ಇ) | ರಾಜ್ಯದ ಹಲವಾರು ಇಲಾಖೆಗಳಲ್ಲಿ ನೇಮಕಾತಿ ಅಕ್ರಮಗಳು ನಿರಂತರವಾಗಿ ನಡೆಯುತ್ತಿದ್ದು, ಇದನ್ನು ತಡೆಗಟ್ಟಲು ಸರ್ಕಾರ ಯಾವ ದೀರ್ಘಾವಧಿ ಕ್ರಮಗಳನ್ನು ತೆಗೆದುಕೊಂಡಿದೆ? (ವಿವರಗಳನ್ನು ನೀಡುವುದು) | ಅನ್ವಯಿಸುವುದಿಲ್ಲ. |

ಸಂಖ್ಯೆ: ಎನರ್ಜಿ 263 ಇಬಿಎಸ್ 2022

(ವಿ ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು
ಸಂಸ್ಕೃತಿ ಸಚಿವರು